# ನಮ್ಮ ವಿದ್ಯಾರ್ಥಿನಿಲಯದ ಸಂಕ್ಷಿಪ್ತ ಪರಿಚಯ

## ಅಲ್ಪಸಂಖ್ಯಾತರ ಮೆಟ್ರಿಕ್ ನಂತರ ಬಾಲಕರ ವಿದ್ಯಾರ್ಥಿನಿಲಯ

## ಚೊಕ್ಕರೆಡ್ಡಿಹಳ್ಳಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ.

| | |
|---|---|
| ಪ್ರಾರಂಭವಾದ ವರ್ಷ ದಿನಾಂಕ | 2009-10ನೇ ಸಾಲು ದಿನಾಂಕ:07-06-2016 |
| ಸರ್ಕಾರಿ ಆದೇಶ ಸಂಖ್ಯೆ | ಎಫ್.ಡಿ2 ಟಿಎಫ್‌ಪಿ 2010 ದಿನಾಂಕ:30-04-2010 |
| ಕಟ್ಟಡದ ವಿಸ್ತೀರ್ಣ | 0.21 ಗುಂಟೆ |
| ಅಕ್ಷಾಂಶ-ರೇಖಾಂಶ | 13.2511'N – 78.415'E |
| ಮಂಜೂರಾತಿಯಾದ ವಿದ್ಯಾರ್ಥಿಗಳ ಸಂಖ್ಯೆ | 50 |
| ಪ್ರಸ್ತುತ ಅಧ್ಯಯನ ಮಾಡುತ್ತಿ ರುವ ವಿದ್ಯಾರ್ಥಿಗಳ ಸಂಖ್ಯೆ | 45 |
| ತರಗತಿ | ಪ್ರಥಮ ಪಿಯುಸಿ ಯಿಂದ ಉನ್ನತ ವ್ಯಾಸಂಗದವರೆಗೆ |
| ಮಾಧ್ಯಮ | - |




## : : ವಿವರಣೆ : :

ಚಿಕ್ಕಬಳ್ಳಾಪುರ ಜಿಲ್ಲೆಯ ಚಿಂತಾಮಣಿ ತಾಲ್ಲೂಕಿನ ಚೊಕ್ಕರೆಡ್ಡಿಹಳ್ಳಿಯಲ್ಲಿರುವ ಅಲ್ಪಸಂಖ್ಯಾತರ ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯವು ಸ್ವಂತ ಕಟ್ಟಡ ಹೊಂದಿದ್ದು, ಪ್ರಥಮ ಪಿಯುಸಿ ಯಿಂದ ಸ್ನಾತಕೋತ್ತರ ಪದವಿಯವರೆವಿಗೂ ವಿದ್ಯಾರ್ಥಿಗಳಿಗೆ ಪ್ರವೇಶವನ್ನು ಕಲ್ಪಿಸಿಕೊಡುತ್ತಿದೆ. ಈ ವಿದ್ಯಾರ್ಥಿನಿಲಯವು 50ಸಂಖ್ಯಾಬಲದಿಂದ 2009-10ನೇ ಶೈಕ್ಷಣಿಕ ಸಾಲಿನಿಂದ ಕಾರ್ಯನಿರ್ವಹಿಸುತ್ತಿದೆ.

ಈ ವಿದ್ಯಾರ್ಥಿನಿಲಯವು ಚಿಂತಾಮಣಿ ಟೌನ್‌ನಿಂದ ಎರಡು ಕಿ.ಮೀ ದೂರದಲ್ಲಿದ್ದು, ವಿದ್ಯಾರ್ಥಿಗಳಿಗೆ ಬಸ್ ವ್ಯವಸ್ಥೆ ಇರುತ್ತದೆ. ಉತ್ತಮವಾದ ಗಾಳಿ-ಬೆಳಕಿನಿಂದ ಕೂಡಿರುತ್ತದೆ. ಮೂಲಭೂತ ಸೌಲಭ್ಯಗಳಾದ ಸೋಪ್‌ಕಿಟ್, ಬೆಡ್, ಬೆಡ್‌ಶಿಟ್, ಫಿಲ್ಲೋ 2ಟಯರ್ ಕಾಟ್‌ಗಳು, ಸೊಳ್ಳೆಪರದೆ ವ್ಯವಸ್ಥೆಯನ್ನು ಉಚಿತವಾಗಿ ನೀಡಲಾಗುತ್ತಿದೆ. ಈ ನಿಲಯವು ಉತ್ತಮವಾದ ಗ್ರಂಥಾಲಯವನ್ನು ಹೊಂದಿದ್ದು, ಗ್ರಂಥಾಲಯದಲ್ಲಿ ಪ್ರಚಲಿತ ವಿದ್ಯಾಮಾನಗಳ ಪುಸ್ತಕಗಳು, ಸ್ಪರ್ಧಾತ್ಮಕ ಪರೀಕ್ಷೆಗಳ ಪುಸ್ತಕಗಳು ಹಾಗೂ ದಿನಪತ್ರಿಕೆ ಮತ್ತು ಮಾಸ ಪತ್ರಿಕೆಗಳ ಸೌಲಭ್ಯವಿದೆ. ಹೆಚ್ಚಿನ ವಿಷಯಗಳ ಮಾಹಿತಿಯನ್ನು ಪಡೆದುಕೊಳ್ಳಲು ಕಂಪ್ಯೂಟರ್ ಮತ್ತು ಇಂಟರ್‌ನೆಟ್, ಟಿ.ವಿ ಸೌಲಭ್ಯ, ಯುಪಿಎಸ್, ಸೋಲಾರ್ ಬೀದಿ ದೀಪಗಳ ವ್ಯವಸ್ಥೆ ಇದೆ. ವಿದ್ಯಾರ್ಥಿಗಳ ಸುರಕ್ಷತೆಗಾಗಿ ಸಿ.ಸಿ ಕ್ಯಾಮರಾಗಳು ಸದಾ ಕಾರ್ಯನಿರ್ವಹಿಸುತ್ತಿರುತ್ತವೆ. ಶುದ್ದ ಕುಡಿಯುವ ನೀರಿನ ಘಟಕ ಹಾಗೂ ವಿದ್ಯಾರ್ಥಿಗಳಿಗೆ ಬಿಸಿ ನೀರಿನ ಸೋಲಾರ್ ವ್ಯವಸ್ಥೆಯನ್ನು ಕಲ್ಪಿಸಲಾಗಿದೆ. ಈ ವಿದ್ಯಾರ್ಥಿನಿಲಯವು ಕೈತೋಟ ಹಾಗೂ ಹಚ್ಚ-ಹಸಿರಿನಿಂದ ಕೂಡಿರುತ್ತದೆ. ವಿದ್ಯಾರ್ಥಿಗಳಿಗೆ ನಿಗಧಿಪಡಿಸಿದ ಮೆನುಚಾರ್ಟ್ ಪ್ರಕಾರ ಪೌಷ್ಠಿಕ ಆಹಾರವನ್ನು ನೀಡಲಾಗುತ್ತಿದೆ. ಪಠ್ಯ ವಿಷಯಗಳ ಜೊತೆಗೆ ಪಠ್ಯೇತರ ವಿಷಯಗಳಾದ ರಾಷ್ಟ್ರೀಯ ಹಬ್ಬಗಳ ದಿನಗಳಂದು ಚರ್ಚಾ ಸ್ಪರ್ಧೆ, ರಸಪ್ರಶ್ನೆ ಕಾರ್ಯಕ್ರಮಗಳಲ್ಲಿ ವಿದ್ಯಾರ್ಥಿಗಳು ಭಾಗವಹಿಸಿ ಬಹುಮಾನಗಳನ್ನು ಪಡೆಯುವಂತೆ ನಿಲಯಪಾಲಕರು ಪ್ರೋತ್ಸಾಹಿಸುತ್ತಾರೆ. ರಜಾ ದಿನಗಳಲ್ಲಿ ವಿದ್ಯಾರ್ಥಿಗಳನ್ನು ಎರಡು ಗುಂಪುಗಳನ್ನಾಗಿ ವಿಂಗಡಿಸಿ, ವಾಲಿಬಾಲ್ ಮತ್ತು ಕ್ರಿಕೆಟ್ ಆಟಗಳಲ್ಲಿ ತೊಡಗಿಸಿಕೊಂಡು ಅವರಲ್ಲಿ ಅಡಗಿರುವ ಪ್ರತಿಭೆಯನ್ನು ಹೊರಹೊಮ್ಮುವಂತೆ ಪ್ರೇರೇಪಿಸಿ ಸಮಾಜದಲ್ಲಿ ಅವರದೇ ಆದ ಛಾಪು ಮೂಡುವ ನಿಟ್ಟಿನಲ್ಲಿ ಪ್ರಯತ್ನಿಸಲಾಗುತ್ತಿದೆ.